# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ


| ಭಾಗ – ೧<br>Part – I | ಬೆಂಗಳೂರು, ಬುಧವಾರ, ೦೮, ಮಾರ್ಚ್, ೨೦೨೩ (ಫಾಲ್ಗುಣ, ೧೭, ಶಕವರ್ಷ, ೧೯೪೪)<br>BENGALURU, WEDNESDAY, 08, MARCH, 2023 (PHALGUNA, 17, SHAKAVARSHA, 1944) | ನಂ. ೯೮<br>No. 98 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಕಲ್ಪಿಸಿರುವ ವಿವಿಧ ಸಮತಳ ಮೀಸಲಾತಿಗಳನ್ನು ಅನುಷ್ಠಾನಗೊಳಿಸಲು ರೋಸ್ಟರನ್ನು ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:**

(1) ದಿನಾಂಕ: 20.06.1995ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೆಹಿಮ 95.
(2) ದಿನಾಂಕ: 22.11.2002ರ ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ 97 ಸೆನೆನಿ 2002.
(3) ದಿನಾಂಕ: 04.01.2008ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 53 ಸೆನೆನಿ 2007.
(4) ದಿನಾಂಕ: 08.01.2016ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 143 ಸೆನೆನಿ 2015.
(5) ದಿನಾಂಕ: 25.09.2020ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಸೆನೆನಿ 2020.
(6) ದಿನಾಂಕ: 14.07.2021ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 179 ಸೆನೆನಿ 2020.
(7) ದಿನಾಂಕ: 23.10.2022ರ ಸರ್ಕಾರದ ಅಧಿಸೂಚನೆ ಸಂಖ್ಯೆ ಸಂವ್ಯಶಾಇ 29 ಶಾಸನ 2022.
(8) ದಿನಾಂಕ 28.12.2022ರ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 01 ಸೆಹಿಮ 2022.

**ಪ್ರಸ್ತಾವನೆ :**

ಮೇಲೆ (1)ರಲ್ಲಿ ಓದಲಾದ ದಿನಾಂಕ: 20.06.1995ರ ಸರ್ಕಾರದ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಭಾರತ ಸಂವಿಧಾನದ ಅನುಚ್ಛೇದ 16(4) ರ ಪ್ರಕಾರ ಅಳವಡಿಸಿಕೊಳ್ಳಬೇಕಾದ ಮೀಸಲಾತಿ ವಿಧಾನ ಮತ್ತು ಅದನ್ನು ಅನುಷ್ಠಾನಗೊಳಿಸಲು ಅನುಸರಿಸಬೇಕಾದ 100 ಬಿಂದುಗಳ ಒಂದು ರೋಸ್ಟರನ್ನು ನಿಗದಿಪಡಿಸಲಾಗಿರುತ್ತದೆ.

2. ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ನೇರ ಮೀಸಲಾತಿ (vertical reservation)ಯ ಜೊತೆಗೆ ಈ ಕೆಳಕಂಡಂತೆ ಸಮತಳ ಮೀಸಲಾತಿಗಳ (horizontal reservation) ಆಸ್ಪದವನ್ನು ಮೇಲೆ (2), (3), (4), (5) ಮತ್ತು (6)ರಲ್ಲಿ ಓದಲಾದ ಸರ್ಕಾರದ ಆದೇಶಗಳಲ್ಲಿ ನಿಗದಿಪಡಿಸಿ ಆದೇಶಿಸಲಾಗಿರುತ್ತದೆ :-

| ಕ್ರ. ಸಂ. | ಸಮತಳ ಮೀಸಲಾತಿಯ ವರ್ಗ | ಸಮತಳ ಮೀಸಲಾತಿಯ ಶೇಕಡವಾರು | ಸಮತಳ ಮೀಸಲಾತಿಯ ಆಸ್ಪದವನ್ನು ಕಲ್ಪಿಸಿರುವ ನಿಯಮ / ಅಧಿನಿಯಮ |
|---|---|---|---|
| (1) | (2) | (3) | (4) |
| 1 | ಮಾಜಿ ಸೈನಿಕರು | ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 10 ರಷ್ಟು | ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9ರ ಉಪ ನಿಯಮ (1) |
| 2 | ಅಂಗವೈಕಲ್ಯವನ್ನುಳ್ಳ ವ್ಯಕ್ತಿಗಳು (persons with disabilities) | 1. ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 5 ರಷ್ಟು.<br>2. ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 4 ರಷ್ಟು. | 1977ರ ನಿಯಮಗಳ ನಿಯಮ 9ರ ಉಪ ನಿಯಮ (1ಎ). |
| 3 | ಯೋಜನೆಗಳಿಂದ ನಿರ್ವಸಿತರಾದವರು | ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 5 ರಷ್ಟು | 1977ರ ನಿಯಮಗಳ ನಿಯಮ 9 ರ ಉಪ ನಿಯಮ (1ಎಎ) |
| 4 | ಮಹಿಳೆಯರು | ಗ್ರೂಪ್-ಎ, ಗ್ರೂಪ್ –ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 33 ರಷ್ಟು. | 1977ರ ನಿಯಮಗಳ ನಿಯಮ 9ರ ಉಪ ನಿಯಮ (1ಬಿ). |
| 5 | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳು. | ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 5 ರಷ್ಟು. | 1977ರ ನಿಯಮಗಳ ನಿಯಮ 9ರ ಉಪ ನಿಯಮ (1ಸಿ). |
| 6 | ತೃತೀಯ ಲಿಂಗಿಗಳು | ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 1 ರಷ್ಟು. | 1977ರ ನಿಯಮಗಳ ನಿಯಮ 9ರ ಉಪ ನಿಯಮ (1ಡಿ) |
| 7 | ಗ್ರಾಮೀಣ ಅಭ್ಯರ್ಥಿಗಳು. | ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಮಾಡುವ ಎಲ್ಲಾ ನೇರ ನೇಮಕಾತಿಯಲ್ಲಿ ಶೇಕಡಾ 25 ರಷ್ಟು. | ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ಅಧಿನಿಯಮ, 2000. |

3. ಮೇಲೆ (7)ರಲ್ಲಿ ಓದಲಾದ ದಿನಾಂಕ: 23.10.2022ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ, 2022ನ್ನು ಹೊರಡಿಸಲಾಗಿದ್ದು, ಈ ಅಧ್ಯಾದೇಶವು